# Akashvani : Bangalore
# Regional Bulletin In Kannada
# 23.09.2025 / 2.30 pm

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ೧೦ನೇ ರಾಷ್ಟ್ರೀಯ ಆಯರ್ವೇದ ದಿನ -ಚಿಕಿತ್ಸಾ ಕೇಂದ್ರಗಳ ಮೂಲಕ ಜಾಗೃತಿ

೨. ಬೆಂಗಳೂರು ರಸ್ತೆ ಗುಂಡಿ ಮುಚ್ಚುವ ಕಾರ್ಯ ಚುರುಕು - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೩. ಹೃದ್ರೋಗ, ಕ್ಯಾನ್ಸರ್ ಚಿಕಿತ್ಸೆಗೆ ಆದತೆ ನೀಡಿ - ಕಂದಾಯ ಸಚಿವ ಕೃಷ್ಣಾ ಭೈರೇಗೌಡ

೪. ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ ಸಂಪೂರ್ಣ ವಿಫಲ; ಬಿಜೆಪಿ ಆರೋಪ

೫. ಸಿನಿಮಾ ಟಿಕೆಟ್ ಗರಿಷ್ಠ ದರ ೨೦೦ ರೂಪಾಯಿ- ಸರ್ಕಾರದ ಆದೇಶಕ್ಕೆ ಉಚ್ಚ ನ್ಯಾಯಾಲಯ ಮಧ್ಯಂತರ ತಡೆ

*************

ಇಂದು ದೇಶಾದ್ಯಂತ ೧೦ನೇ ರಾಷ್ಟ್ರೀಯ ಆಯರ್ವೇದ ದಿನ ಆಚರಿಸಲಾಗುತ್ತಿದೆ. ಮಾನವ ಮತ್ತು ಪ್ರಕೃತಿಯ ನಡುವಿನ ಬಾಂಧವ್ಯ ವೃದ್ಧಿಸುವುದು ಆಯುರ್ವೇದ ಪದ್ಧತಿಯ ಮೂಲ ಉದ್ದೇಶವಾಗಿದೆ ಎಂದು ದಾವಣಗೆರೆ ಜಿಲ್ಲಾ ಆಯುಷ್ ವೈದ್ಯಾಧಿಕಾರಿ ಡಾ. ಯೋಗೇಂದ್ರ ಕುಮಾರ್ ತಿಳಿಸಿದ್ದಾರೆ. ದಾವಣಗೆರೆಯ ಸರ್ಕಾರಿ ಸಂಯುಕ್ತ ಆಯುಷ್ ಆಸ್ಪತ್ರೆಯಲ್ಲಿಂದು ಹಮ್ಮಿಕೊಂಡಿದ್ದ ೧೦ನೇ ಆಯುರ್ವೇದ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯ ೨೫ ಆಯುರ್ವೇದ ಚಿಕಿತ್ಸಾ ಕೇಂದ್ರಗಳ ಮೂಲಕ ಜಾಗೃತಿ ಮೂಡಿಸಲಾಗಿದೆ ಎಂದು ಹೇಳಿದ್ದಾರೆ.

*************

ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ನಿವಾಸದ ಮುಂಭಾಗದ ರಸ್ತೆಯು ಗುಂಡಿಗಳಿಂದ ತುಂಬಿದೆ ಎಂದು ಹೇಳುವ ಮೂಲಕ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿವಾದ ಸೃಷ್ಟಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಬೆಂಗಳೂರಿನಲ್ಲಿ ನಿತ್ಯ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಸಾವಿರ ಗುಂಡಿಗಳನ್ನು ಮುಚ್ಚುತ್ತಿದೆ ಎಂದು ಹೇಳಿದ್ದಾರೆ. ರಸ್ತೆ ಗುಂಡಿಗಳು ಬರೀ ತಮ್ಮ ರಾಜ್ಯದ ಸಮಸ್ಯೆ ಅಲ್ಲ ಎಂದು ತಿಳಿಸಿದ್ದಾರೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ರಸ್ತೆಗಳನ್ನು ಚೆನ್ನಾಗಿ ನಿರ್ವಹಿಸಿದ್ದರೆ ಈ ಹಂತ ತಲುಪುತ್ತಿರಲಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

*************

ಸಾಂಕ್ರಾಮಿಕ ರೋಗಗಳಿಗಷ್ಟೇ ಸೀಮಿತವಾಗಬೇಡಿ ಎಂದು ಕಂದಾಯ ಸಚಿವ ಕೃಷ್ಣಾ ಭೈರೇಗೌಡ ಆರೋಗ್ಯ ಇಲಾಖೆಗೆ ಸ್ಪಷ್ಟ ನಿರ್ದೇಶನ ನೀಡಿದ್ದಾರೆ. ಹಾಸನ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯಲ್ಲಿ, ಜಿಲ್ಲಾ ಆರೋಗ್ಯಾಧಿಕಾರಿ ಮತ್ತು ಹಿಮ್ಸ್ ನಿರ್ದೇಶಕರೊಂದಿಗೆ ಆರೋಗ್ಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸಮಗ್ರ ಮಾಹಿತಿ ಪಡೆದ ಅವರು, ಆಧುನಿಕ ಜೀವನಶೈಲಿಯಿಂದ ಬರುವ ರೋಗಗಳ ಬಗ್ಗೆ ವಿಶೇಷ ಗಮನ ಹರಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಹೆಚ್ಚುತ್ತಿರುವ ಜೀವನಶೈಲಿ ಕಾಯಿಲೆಗಳಾದ ಕ್ಯಾನ್ಸರ್, ಯಕೃತ್ ಮತ್ತು ಹೃದ್ರೋಗಗಳ ಚಿಕಿತ್ಸೆಯ ಕಡೆಗೆ ಹೆಚ್ಚಿನ ಗಮನ ಹರಿಸುವಂತೆ ಆರೋಗ್ಯ ಅಧಿಕಾರಿಗಳಿಗೆ ಸಲಹೆ ನೀಡಿದ್ದಾರೆ. ಇಲ್ಲಿಯವರೆಗೆ ಸಾಂಪ್ರದಾಯಿಕ ರೋಗಗಳಾದ ಡೆಂಗ್ಯೂ, ಮಲೇರಿಯಾ ಮುಂತಾದವುಗಳ ನಿರ್ವಹಣೆಗೆ ಹೆಚ್ಚು ಒತ್ತು ನೀಡಲಾಗುತ್ತಿತ್ತು. ಆದರೆ, ಈಗಿನ ಆಧುನಿಕ ಸವಾಲುಗಳಿಗೆ ಹೊಂದಿಕೊಳ್ಳುವಂತೆ ಆರೋಗ್ಯ ವ್ಯವಸ್ಥೆ ಸುಧಾರಿಸಬೇಕು ಎಂದು ತಿಳಿಸಿದ್ದಾರೆ.

*************

ಹಿಂದುಳಿದ ವರ್ಗಗಳ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯು ಅಕ್ಟೋಬರ್ ೭ ರವರೆಗೆ ನಡೆಯಲಿದೆ. ಇಂದು ಹೈಕೋರ್ಟ್‌ನಲ್ಲಿ ಸಮೀಕ್ಷೆಗೆ ತಡೆ ಕೋರಿ ಸಲ್ಲಿಕೆಯಾಗಿದ್ದ ಅರ್ಜಿಯ ತೀರ್ಪು ಹೊರಬೀಳುವ ಸಾಧ್ಯತೆ ಇದೆ. ಸದರಿ ಸಮೀಕ್ಷೆಗೆ ಸಂಬಂಧಿಸಿದಂತೆ ಸಾರ್ವಜನಿಕರಿಗೆ ಮಾಹಿತಿ ನೀಡುವ ಉದ್ದೇಶದಿಂದ ಕಾರವಾರದ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಸಹಾಯವಾಣಿ ಸೇವೆ ಪ್ರಾರಂಭಿಸಲಾಗಿದೆ. ಹಾವೇರಿ ಜಿಲ್ಲೆಯಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಉತ್ತಮ ಆರಂಭ ಸಿಕ್ಕಿದ್ದು, ಮೊದಲ ದಿನವೇ ೬೮೧ ಮನೆಗಳ ಮಾಹಿತಿ ದಾಖಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ

ದಾನಮ್ಮನವರ ತಿಳಿಸಿದ್ದಾರೆ. ಜಿಲ್ಲೆಯ ಪ್ರಾಥಮಿಕ ಶಾಲಾ ಶಿಕ್ಷಕರು ಗಣತಿದಾರರಾಗಿ ಮನೆ ಮನೆಗೆ ತೆರಳಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

*************

ಸರ್ಕಾರ ನಡೆಸುತ್ತಿರುವ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ಮೊದಲ ದಿನವೇ ವಿಫಲಗೊಂಡಿದೆ ಎಂದು ಬಿಜೆಪಿ ಆರೋಪಿಸಿದೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ರಾಜ್ಯ ಬಿಜೆಪಿ ಸರ್ವರ್ ಸಮಸ್ಯೆ, ಒಟಿಪಿ ಸಮಸ್ಯೆ, ಅಪ್ಲಿಕೇಶನ್ ಡೌನ್‌ಲೋಡ್ ಆಗದೇ ಸಮಸ್ಯೆ, ಶಿಕ್ಷಕರಿಗೆ ಕಿಟ್ ಸಿಗದೆ ಸಮಸ್ಯೆ ಸೇರಿದಂತೆ ಹಲವಾರು ಸಮಸ್ಯೆಗಳು ಉದ್ಭವಿಸಿವೆ ಎಂದು ವ್ಯಂಗ್ಯ ವಾಡಿದೆ. ಕಾಂತರಾಜ್ ವರದಿ ಹಾಗೂ ಜಯಪ್ರಕಾಶ್ ಹೆಗಡೆ ವರದಿಯಂತೆಯೆ ಈ ಸಮೀಕ್ಷೆಯು ಮೂಲೆ ಗುಂಪು ಆಗಲಿದೆ ಎಂದು ಹೇಳಿದೆ. ಈ ನಡುವೆ ಬಿಜೆಪಿ ನಿಯೋಗ ಇಂದು ಹಿಂದುಳಿದ ವರ್ಗದ ಆಯೋಗಕ್ಕೆ ಮನವಿ ಸಲ್ಲಿಸಿದ್ದು, ೩೩ಕ್ರೈಸ್ತ ಜಾತಿಗಳ ಬಗ್ಗೆ ಸ್ಪಷ್ಟನೆ ನೀಡಿ ಉಳಿದ ೧೩ ದಲಿತ ಕ್ರೈಸ್ತ ಜಾತಿಗಳ ಬಗ್ಗೆ ಸ್ಪಷ್ಟನೆ ನೀಡದಿರುವುದು ಸಮರ್ಥನೀಯವಲ್ಲ ಎಂದು ತಿಳಿಸಿದೆ. ಸಮೀಕ್ಷೆಗೆ ಬಳಸುವ ಆಪ್‌ನಲ್ಲಿ ೧೫ ಪರಿಶಿಷ್ಠ ಜಾತಿಗಳನ್ನು ತೆಗೆಯಬೇಕು ಎಂದು ಮನವಿ ಮಾಡಿದೆ.

*************

ಸಿನಿಮಾ ಟಿಕೆಟ್‌ಗೆ ಗರಿಷ್ಟ ೨೦೦ ರೂಪಾಯಿ ದರ ನಿಗದಿಪಡಿಸಿ ರಾಜ್ಯ ಸರ್ಕಾರ ಹೊರಡಿಸಿದ್ದ ಆದೇಶಕ್ಕೆ ಉಚ್ಚ ನ್ಯಾಯಾಲಯ ಮಧ್ಯಂತರ ತಡೆ ನೀಡಿದೆ. ನ್ಯಾಯಮೂರ್ತಿ ರವಿ ಹೊಸಮನಿ ಅವರಿದ್ದ ಪೀಠ ತಡೆ ನೀಡಿ ವಿಚಾರಣೆ ಮುಂದೂಡಿದೆ. ಮಲ್ಟಿಪ್ಲೆಕ್ಸ್ ಸೇರಿ ರಾಜ್ಯದ ಎಲ್ಲ ಚಿತ್ರಮಂದಿರಗಳಲ್ಲಿ ಎಲ್ಲಾ ಭಾಷೆಯ ಚಲನಚಿತ್ರಗಳ ಪ್ರದರ್ಶನಕ್ಕೆ ತೆರಿಗೆ ಹೊರತುಪಡಿಸಿ, ಟಿಕೆಟ್ ದರ ಗರಿಷ್ಠ ೨೦೦ ಏಕರೂಪ ದರ ನಿಗದಿಪಡಿಸಿ ರಾಜ್ಯ ಸರ್ಕಾರ ಜಾರಿಗೆ ತಂದಿರುವ ನಿಯಮಗಳಿಗೆ ತಡೆ ನೀಡಬೇಕೆಂದು ಕೋರಿ ಅರ್ಜಿದಾರರು ಮನವಿ ಮಾಡಿದ್ದರು. ಅರ್ಜಿದಾರರು ಹಾಗೂ ಸರ್ಕಾರದ ಪರ ವಕೀಲರ ಸುದೀರ್ಘ ವಾದ-ಪ್ರತಿವಾದ ಆಲಿಸಿದ್ದ ನ್ಯಾಯಪೀಠ ಇಂದು ಮಧ್ಯಂತರ ತಡೆ ನೀಡಿ ಆದೇಶ ಪ್ರಕಟಿಸಿದೆ. ಸರ್ಕಾರ ಏಕಪಕ್ಷೀಯವಾಗಿ ನಿರ್ಧಾರ ಕೈಗೊಂಡು ದರ ನಿಗದಿ ಮಾಡಿದೆ. ಇದು ಕಾನೂನು ಬಾಹಿರ ಆದೇಶವಾಗಿದ್ದು, ಸರ್ಕಾರ ಚಿತ್ರ ನಿರ್ಮಾಣ, ಪ್ರದರ್ಶನದ ಬಗ್ಗೆ ಮಾಹಿತಿ ತಿಳಿಯದೇ ಈ ನಿರ್ಧಾರ ಕೈಗೊಂಡಿದೆ ಎಂದು ಅರ್ಜಿದಾರರು ವಾದಿಸಿದ್ದರು.

*************

ಅತಿವೃಷ್ಠಿಯಿಂದಾಗಿ ರಾಜ್ಯದ ಹಲವೆಡೆ ರೈತರು ಸಂಕಷ್ಟದಲ್ಲಿದ್ದಾರೆ. ಬೆಳೆಹಾನಿಯಾದ ಬಗ್ಗೆ ಅಧಿಕಾರಿಗಳು ಸಮೀಕ್ಷೆ ನಡೆಸುತ್ತಿದ್ದು, ಸರ್ಕಾರಕ್ಕೆ ವರದಿ ಸಲ್ಲಿಸಿ ಸೂಕ್ತ ಪರಿಹಾರ ನೀಡಲಾಗುವುದು ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ. ಸುರಪುರ ತಾಲ್ಲೂಕಿನ ಹೆಗ್ಗಣದೊಡ್ಡಿ-ಗೊಡ್ರಿಹಾಳ ಗ್ರಾಮದಲ್ಲಿ ನೂತನ ಗ್ರಾಮ ಪಂಚಾಯಿತಿ ಕಟ್ಟಡ, ಪ್ರಾಥಮಿಕ ಆರೋಗ್ಯ ಕೇಂದ್ರ ಭೂಮಿ ಪೂಜಾ ನೆರವೇರಿಸಿ ಮಾತನಾಡಿದ ಅವರು, ಕೆಕೆಆರ್‌ಡಿಬಿ ಹಾಗೂ ಇನ್ನಿತರೆ ಅನುದಾನದಲ್ಲಿ ಸದ್ಯದಲ್ಲೆ ಪ್ರಾಥಮಿಕ ಆರೋಗ್ಯ ಕೇಂದ್ರ ಕಟ್ಟಡ ನಿರ್ಮಾಣವಾಗಲಿದೆ ಎಂದು ಹೇಳಿದ್ದಾರೆ.

*************

ವಿಶ್ವವಿಖ್ಯಾತ ನಾಡ ಹಬ್ಬ ದಸರಾ ಮಹೋತ್ಸವದಲ್ಲಿ ಮಹಿಳೆಯರಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಇಂದು ಮುಂಜಾನೆ ಅರಮನೆ ಅವರಣದಲ್ಲಿ ದಸರಾ ರಂಗೋಲಿ ಸ್ಪರ್ಧೆಗೆ ಚಾಲನೆ ದೊರೆಯಿತು. ಮಹಿಳಾ ದಸರಾ ಉಪ ಸಮಿತಿ ವತಿಯಿಂದ ಏರ್ಪಡಿಸಿದ್ದ ರಂಗೋಲಿ ಸ್ಪರ್ಧೆ ಕಾರ್ಯಕ್ರಮಕ್ಕೆ ಶಾಸಕ ಶ್ರೀವತ್ಸ ಚಾಲನೆ ನೀಡಿದರು . ಈ ಬಾರಿ ಎಂಟು ವರ್ಷಗಳ ಕಾಲ ಚಿನ್ನದ ಅಂಬಾರಿ ಹೊತ್ತ ಅರ್ಜುನನ ನೆನಪಿಗಾಗಿ ರಂಗೋಲಿ ಮುಖಾಂತರ ಚಿತ್ತಾರ ಬಿಡಿಸಲಾಗಿದೆ. ಗ್ರಾಮೀಣ ಭಾಗದ ಮಹಿಳೆಯರಿಗೆ ಅವಕಾಶ ನೀಡಲಾಗಿದೆ.

*************

ಮೈಸೂರು ರಾಜಮನೆತನದ ಕುಲದೈವ ಮಂಡ್ಯ ಜಿಲ್ಲೆಯ ಮೇಲುಕೋಟೆಯ ಶ್ರೀ ಚಲುವನಾರಾಯಣಸ್ವಾಮಿ ಸನ್ನಿಧಿಯಲ್ಲಿ ಮಹಾಲಕ್ಷ್ಮಿ ಕಲ್ಯಾಣ ನಾಯಕಿ ದೇವಿಗೆ ನಡೆದ ಬಂಗಾರದ ಶೇಷವಾಹನೋತ್ಸವ ಮತ್ತು ನವರಾತ್ರಿ ಮಹೋತ್ಸವಕ್ಕೆ ವಿದ್ಯುಕ್ತ ಚಾಲನೆ ದೊರೆಯಿತು. ಬಂಗಾರದ ಶೇಷ ವಾಹನೋತ್ಸವ, ಪಲ್ಲಕ್ಕಿ ಉತ್ಸವ ರಾಜಬೀದಿಯಲ್ಲಿ ವೈಭವದಿಂದ ನಡೆಯಿತು. ಚಲುವನಾರಾಯಣಸ್ವಾಮಿಗೆ ಅಕ್ಟೋಬರ್ ೨ರ ವಿಜಯದಶಮಿಯಂದು ಮಹಾರಾಜರ ಅಲಂಕಾರ ನೆರವೇರಿಸಲಾಗುತ್ತದೆ. ಸಂಜೆ ಸ್ವಾಮಿಗೆ ಅಶ್ವವಾಹನದ ಜಂಬೂಸವಾರಿ ಬನ್ನಿ ಪೂಜೆ, ವಿಜಯೋತ್ಸವ ಮೆರವಣಿಗೆ ನಡೆಯಲಿದೆ

*************

ಮಡಿಕೇರಿ ಮತ್ತು ಗೋಣಿಕೊಪ್ಪ ದಸರಾ ಸಿದ್ಧತೆ ಬಗ್ಗೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಇಂದು ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದಾರೆ. ಈ ನಡುವೆ ಮಡಿಕೇರಿಯಲ್ಲಿ ನಡೆಯುತ್ತಿರುವ ದಸರಾ ಮಹೋತ್ಸವಕ್ಕೆ ಮಳೆ ಅಡ್ಡಿಯಾಗಿದೆ. ಬೆಳಗ್ಗಿನಿಂದಲೇ ಮಡಿಕೇರಿಯಲ್ಲಿ ಸುರಿಯುತ್ತಿರುವ ಮಳೆಯಿಂದಾಗಿ ಹಬ್ಬದ ಕಳೆಗೆ ಮಂಕು ಕವಿದಂತಾಗಿದೆ. ನಿನ್ನೆ ಸಂಜೆ ಮಡಿಕೇರಿಯ ನಾಲ್ಕು ಶಕ್ತಿದೇವತೆಗಳ ಕರಗ ಪೂಜೆಯೊಂದಿಗೆ ಸಾಂಪ್ರದಾಯಿಕವಾಗಿ ಮಡಿಕೇರಿ ದಸರಾಕ್ಕೆ ಚಾಲನೆ ದೊರಕಿತ್ತು. ಇಂದು ಮಳೆಯ ನಡುವೇ ಕರಗಗಳು ಮಡಿಕೇರಿ ನಗರ ಪ್ರದಕ್ಷಿಣೆ ಆರಂಭಿಸಿವೆ.

*************

.